# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ, ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಪ್ರಕರಣದ ಕುರಿತು –ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/04/ಇಎನ್‌ಕ್ಯೂ/2015 ದಿನಾಂಕ: 30.01.2015
2. ಅಪರ ನಿಬಂಧಕರು, ವಿಚಾರಣೆ-8, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE-71/2015/ARE-8, Dt:25.08.2018.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE-71/2015/ARE-8, Dt:29.08.2018.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/478/ಗ್ರಾಪಂಕಾ/2018 ದಿನಾಂಕ: 09.10.2018.
5. ಶ್ರೀ ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ: 14.11.2018.

<u>ಪ್ರಸ್ತಾವನೆ :</u>

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಕೆ.ಎಂ. ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ, ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಅಪರ ನಿಬಂಧಕರು, ವಿಚಾರಣೆ-8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

<u>**"ದೋಷಾರೋಪಣೆ"**</u>

ಆಪಾದಿತ ಸರ್ಕಾರಿ ನೌಕರರಾದ ಶ್ರೀ ಕೆ.ಎಂ. ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ ರವರು ಕಣ್ಣಂಗಾಲ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಸಮಯದಲ್ಲಿ ಕಣ್ಣಂಗಾಲ ಗ್ರಾಮ ಪಂಚಾಯತಿಯ ಆಗಿನ ಸಹಾಯಕ ಇಂಜಿನಿಯರ್ ಶ್ರೀ ಪೂಣಚ್ಚ ಹಾಗೂ ಆಗಿನ ಗ್ರಾಮ ಪಂಚಾಯತಿಯ ಅಧ್ಯಕ್ಷರಾಗಿದ್ದ ಶ್ರೀಮತಿ ಜ್ಯೋತಿ ನಾಣಯ್ಯ ಅವರೊಂದಿಗೆ ಸೇರಿಕೊಂಡು ಸ್ಥಳೀಯ ನಾಗರೀಕರಿಗೆ ಯಾವುದೇ ಉಪಯೋಗವಿರದ ಕೇವಲ ಒಬ್ಬ ಖಾಸಗಿ ಮನೆಯವರಿಗೆ ಉಪಯೋಗವಾಗುವುದಕ್ಕಾಗಿ ರೂ. 2,24,552.75 ಗಳ ವೆಚ್ಚದ ಕಣ್ಣಂಗಾಲ ಗ್ರಾಮ ಪಂಚಾಯತಿಯ ಹಚ್ಚಿನಾಡು ಗ್ರಾಮದ ಮಚ್ಚರಂಡ ಗಿರೀಶ್ ಮನೆ ಹಿಂಭಾಗ ತಡೆಗೋಡೆ ನಿರ್ಮಾಣ ಕಾಮಗಾರಿಯನ್ನು ನಿರ್ವಹಿಸುವ ಮೂಲಕ ಶ್ರೀ ಕೆ.ಎಂ. ಚಂದ್ರಮೌಳಿ ರವರು ಸರ್ಕಾರಕ್ಕೆ ರೂ. 74,874,25/- ನಷ್ಟ ಉಂಟುಮಾಡಿದ್ದಾರೆ.

ಆದ ಕಾರಣ ಆಪಾದಿತ ಸರ್ಕಾರಿ ನೌಕರರಾದ ನೀವು ವಹಿಸಿಕೊಂಡಿದ್ದ ಹುದ್ದೆಗಳ ಕಾನೂನುಬದ್ಧ ಕರ್ತವ್ಯಗಳನ್ನು ನಿರ್ವಹಿಸುವಲ್ಲಿ ನಿಷ್ಠೆ ತೋರಿಸದೇ ಇರುವ ಮೂಲಕ ನಿಮ್ಮಗಳ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ

ಪ್ರಾಮಾಣಿಕತೆ ಹಾಗೂ ಕರ್ತವ್ಯ ನಿಷ್ಠೆಯನ್ನು ಪಾಲಿಸದೆ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ/ದುರ್ವರ್ತನೆಯಿಂದ ವರ್ತಿಸಿ, ನೀವು ಕರ್ನಾಟಕ ನಾಗರೀಕ ಸೇವಾ ನಿಯಮಗಳು (ನಡತೆ) 1966ರ ನಿಯಮ (3)(1)(i) ಮತ್ತು (iii) ರಡಿಯಲ್ಲಿ ಉಕ್ತವಾದ ದುರ್ನಡತೆ ಎಸಗಿದ್ದೀರಿ ಎಂದು ದೋಷಾರೋಪಣೆ ಮಾಡಲಾಗಿದೆ.

ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀ ಕೆ.ಎಂ. ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ವಿಚಾರಣಾಧಿಕಾರಿಯವರ ವರದಿಯನ್ನು ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಕೆ.ಎಂ. ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ ರವರಿಗೆ ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ (3)(1)(i) ಮತ್ತು (iii) ನಿಯಮದಡಿ ನಿರ್ದಿಷ್ಟಪಡಿಸಿದಂತೆ ಸದರಿಯವರ ಸಂಬಳ ಹಾಗೂ ಇತರೆ ಭತ್ಯೆಗಳಲ್ಲಿ ರೂ. 74,874/-(ಎಪ್ಪತ್ನಾಲ್ಕು ಸಾವಿರ ಎಂಟುನೂರು ಎಪ್ಪತ್ನಾಲ್ಕು ರೂಪಾಯಿಗಳು) ಗಳ ಮೊತ್ತವನ್ನು ವಸೂಲು ಮಾಡುವಂತೆ ಶಿಫಾರಸ್ಸು ಮಾಡಿದ್ದಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಈ ಸಂಬಂಧ ಶ್ರೀ ಕೆ.ಎಂ. ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (5) ರಲ್ಲಿ ಶ್ರೀ ಕೆ.ಎಂ. ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ ರವರು ಎರಡನೇ ಕಾರಣ ಕೇಳುವ ನೋಟೀಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ತಮ್ಮ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

2010-11 ಹಾಗೂ 2011-12ನೇ ಸಾಲಿನಲ್ಲಿ ಕಣ್ಣಾಂಗಾಲ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ನರೇಗ ಯೋಜನೆಯಡಿಯಲ್ಲಿ ಸ್ಥಳೀಯ ನಾಗರೀಕರಿಗೆ ಉಪಯೋಗವಾಗುವ ತಡೆಗೋಡೆ ನಿರ್ಮಾಣ ಕಾಮಗಾರಿಯನ್ನು ಮೇಲಾಧಿಕಾರಿಗಳ ನಿರ್ದೇಶನದ ಮೇರೆಗೆ ತನ್ನ ಅಧಿಕಾರ ವ್ಯಾಪ್ತಿಯ ಚೌಕಟ್ಟಿನೊಳಗೆ ಕಾಮಗಾರಿ ಕೆಲಸಗಳನ್ನು ಮಾಡಿಸಿರುತ್ತೇನೆ. ಸದರಿ ಕಾಮಗಾರಿಗಳು ಸಾರ್ವಜನಿಕವಾಗಿ ಉಪಯೋಗವಾಗಿಲ್ಲವೆಂದು ಸ್ಥಳೀಯರಾದ ನಂಜಪ್ಪರವರ ಪಿರ್ಯಾಧಿಯ ಮೇರೆಗೆ 2015 ರಲ್ಲಿ ತನ್ನ ಮೇಲೆ ಆರೋಪ ಮಾಡಿದ್ದು, ಮಾನ್ಯ ಉಪಲೋಕಾಯುಕ್ತ-8 ರಲ್ಲಿ ವಿಚಾರಣೆಗೊಳಪಡಿಸಿದ್ದು, ಸದರಿ ನ್ಯಾಯಾಲಯವು ತನ್ನ ಮೇಲೆ ಮಾಡಿರುವ ಆರೋಪವನ್ನು ಎತ್ತಿ ಹಿಡಿದಿರುತ್ತದೆ. ಮಾನ್ಯ ನ್ಯಾಯಾಲಯವು, ತಾನು ಹಾಜರುಪಡಿಸಿದ ದಾಖಲೆಗಳು ಹಾಗೂ ತನ್ನ ಪ್ರಮಾಣ ಪತ್ರವನ್ನು ಮತ್ತು ಹೇಳಿಕೆಗಳನ್ನು ಸರಿಯಾಗಿ ಗಮನಿಸದೆ ತನ್ನ ವಿರುದ್ಧ ವ್ಯತಿರಿಕ್ತವಾದ ಆದೇಶವನ್ನು ಮಾಡಿರುತ್ತಾರೆ.

ಆದುದರಿಂದ, ಸದರಿ ಆದೇಶದ ವಿರುದ್ಧ ತಾನು ಮೇಲ್ಮನವಿ ಸಲ್ಲಿಸಲು ಉತ್ಸುಕನಾಗಿದ್ದು, ಸದರಿ ಆದೇಶವನ್ನು ಜಾರಿಗೊಳಿಸದೆ ಕಾಯ್ದಿರಿಸಬೇಕಾಗಿ ಕೋರಿದ್ದಾರೆ.

ಸದರಿ ಆಪಾದಿತರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರ ಹೇಳಿಕೆಯನ್ನು ಒಪ್ಪಲು ಬರುವುದಿಲ್ಲ, ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಸದರಿ ಪ್ರಕರಣದಲ್ಲಿ ಶ್ರೀ ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ, ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ಇವರು 2ನೇ ಕಾರಣ ಕೇಳುವ ನೋಟೀಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ಅಪರ ನಿಬಂಧಕರು, ವಿಚಾರಣೆ-8, ಕರ್ನಾಟಕ ಲೋಕಾಯುಕ್ತ ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಇವರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಸದರಿ ಆಪಾದಿತರು 2ನೇ ಕಾರಣ ಕೇಳುವ

ನೋಟೀಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶ್ರೀ ಚಂದ್ರಮೌಳಿ ರವರು ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ (3)(!)(i) ಮತ್ತು (iii) ನಿಬಂಧನೆಯನ್ನು ಉಲ್ಲಂಘಿಸಿರುವುದರಿಂದ ಸದರಿ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಶ್ರೀ ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ, ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ರವರ ಸಂಬಳ ಹಾಗೂ ಇತರೆ ಭತ್ಯೆಗಳಲ್ಲಿ ರೂ. 74,874/-(ಎಪ್ಪತ್ನಾಲ್ಕು ಸಾವಿರ ಎಂಟುನೂರು ಎಪ್ಪತ್ನಾಲ್ಕು ರೂಪಾಯಿಗಳು) ಗಳ ಮೊತ್ತವನ್ನು ವಸೂಲಾತಿ ಮಾಡುವ ದಂಡನೆ ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:478:ಗ್ರಾಪಂಕಾ:2018 ಬೆಂಗಳೂರು, ದಿನಾಂಕ: 14-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ, ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ಇವರು ಕರ್ತವ್ಯಲೋಪ ಎಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ (3)(1)(i) ಮತ್ತು (iii) ನಿಯಮದಡಿ ಸದರಿಯವರ ಸಂಬಳ ಹಾಗೂ ಇತರೆ ಭತ್ಯೆಗಳಲ್ಲಿ ರೂ. 74,874/-(ಎಪ್ಪತ್ನಾಲ್ಕು ಸಾವಿರ ಎಂಟುನೂರು ಎಪ್ಪತ್ನಾಲ್ಕು ರೂಪಾಯಿಗಳು) ಗಳ ಮೊತ್ತವನ್ನು ವಸೂಲಾತಿ ಮಾಡುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

14/3/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು; ವಿಚಾರಣೆ-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಡಗು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ,
6. ಶ್ರೀ ಚಂದ್ರಮೌಳಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಂಗಾಲ ಗ್ರಾಮ ಪಂಚಾಯತಿ, ವಿರಾಜಪೇಟೆ ತಾಲ್ಲೂಕು, ಕೊಡಗು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.